# All India Radio: Bangalore
# Regional Bulletin In Kannada
# 25.06.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 25.06.2025 / 6.40 p.m.
**<><><><>**

ಮುಖ್ಯಾಂಶಗಳು

- ಆಡಳಿತದಲ್ಲಿ ಎಲ್ಲಾ ಇಲಾಖೆಗಳು ಕಡ್ಡಾಯವಾಗಿ ಕನ್ನಡ ಬಳಸುವಂತೆ ಸರ್ಕಾರ ಮಹತ್ವದ ಆದೇಶ
- ರಾಜ್ಯದಲ್ಲಿ ಇನ್ನು ಮುಂದೆ ಕಟ್ಟಡ ನಕ್ಷೆ ಅನುಮತಿ ಇಲ್ಲದೆ ಯಾರೂ ಮನೆ ಕಟ್ಟುವಂತಿಲ್ಲ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಬೆಳಗಾವಿಯಲ್ಲಿ ಭಾರೀ ಮಳೆ : ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ನದಿ ಕೊಳ್ಳಗಳು- ಜನಜೀವನ ಅಸ್ಥವ್ಯಸ್ತ
- ವಾರಕ್ಕೆ ಮೂರು ದಿನ ಕಾವೇರಿ ಆರತಿ ; ಶಾಸಕರು ರೈತ ಮುಖಂಡರ ಜೊತೆ ಸಭೆ ನಡೆಸಿ ಸರ್ಕಾರ ತೀರ್ಮಾನ
- ರಾಜ್ಯಾದ್ಯಂತ ಗ್ರಾಮ ಪಂಚಾಯತಿ ಆಡಿಟ್ ಆಕ್ಷೇಪಣೆಗಳ ತೀರುವಳಿಗಾಗಿ ವಿಶೇಷ ಅಭಿಯಾನ

<><><><>

ಆಡಳಿತದಲ್ಲಿ ಕನ್ನಡ ಕಡ್ಡಾಯಗೊಳಿಸಿ ರಾಜ್ಯಸರ್ಕಾರ ಆದೇಶ ಹೊರಡಿಸಿದೆ. ಕನ್ನಡದಲ್ಲಿ ಬರುವ ಅರ್ಜಿ ಪತ್ರಗಳಿಗೆ ಕನ್ನಡದಲ್ಲಿ ಉತ್ತರಿಸಿ ನಾಮ ಫಲಕ ಕನ್ನಡದಲ್ಲೇ ಪ್ರದರ್ಶಿಸಿ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮಹತ್ವದ ಆದೇಶ ಹೊರಡಿಸಿದ್ದಾರೆ. ವಿಧಾನ ಮಂಡಲದ ಕಾರ್ಯಕಲಾಪಗಳು, ಪತ್ರ ವ್ಯವಹಾರ, ಗಮನಸೆಳೆಯುವ ಸೂಚನೆ ಇತ್ಯಾದಿಗಳು ಕಡ್ಡಾಯವಾಗಿ ಕನ್ನಡದಲ್ಲಿಯೇ ಸಲ್ಲಿಸಬೇಕು. ನೇಮಕಾತಿ, ವರ್ಗಾವಣೆ ಮತ್ತು ರಜೆ ಮಂಜೂರಾತಿ ಇತರ ಎಲ್ಲಾ ಸರ್ಕಾರದ ಆದೇಶಗಳನ್ನು ಕನ್ನಡದಲ್ಲಿ ಹೊರಡಿಸಲು ಸ್ಪಷ್ಟ ಸೂಚನೆ ನೀಡಿದ್ದಾರೆ. ಕಚೇರಿಗಳಿಗೆ ಒದಗಿಸಿರುವ ಆಂಗ್ಲ ಭಾಷಾ ನಮೂನೆ, ದಾಖಲೆ ಪುಸ್ತಕ ಮುಂತಾದವುಗಳನ್ನು ಕನ್ನಡದಲ್ಲಿ ಭರ್ತಿ ಮಾಡಬೇಕು. ಆಂತರಿಕ ಪತ್ರ ವ್ಯವಹಾರ, ಕಡತದ ಟಿಪ್ಪಣಿ ಕನ್ನಡದಲ್ಲಿಯೇ

ಇರಬೇಕು. ಸಭಾ ಸೂಚನೆ, ಕಾರ್ಯಸೂಚಿ, ಸಂಕ್ಷಿಪ್ತ ಟಿಪ್ಪಣಿ ಹಾಗೂ ನಡಾವಳಿಗಳನ್ನು ಕನ್ನಡದಲ್ಲಿ ತಯಾರಿಸಿರಬೇಕು. ಈ ಮೂಲಕ ಸರ್ಕಾರದ ಭಾಷಾ ನೀತಿಯನ್ನು ಯಶಸ್ವಿಯಾಗಿ ಕಾರ್ಯರೂಪಕ್ಕೆ ತರಬೇಕು ಎಂದು ನಿರ್ದೇಶನ ನೀಡಿದ್ದಾರೆ. ಕೇಂದ್ರ ಸರ್ಕಾರ, ಹೊರ ರಾಜ್ಯಗಳು ಮತ್ತು ನ್ಯಾಯಾಲಯಗಳ ಪತ್ರ ವ್ಯವಹಾರಗಳನ್ನು ಹೊರತುಪಡಿಸಿ, ಉಳಿದೆಲ್ಲಾ ಪತ್ರ ವ್ಯವಹಾರಗಳು ಕಡ್ಡಾಯವಾಗಿ ಕನ್ನಡದಲ್ಲಿಯೇ ಇರುವಂತೆ ಸೂಚಿಸಿದ್ದಾರೆ.

<><><>

"ಕಟ್ಟಡ ನಕ್ಷೆ ಅನುಮತಿ, ಸ್ವಾಧೀನ ಪ್ರಮಾಣ ಪತ್ರವಿಲ್ಲದೆ ನೀರು ಹಾಗೂ ವಿದ್ಯುತ್ ಸಂಪರ್ಕ ನೀಡುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಇತ್ತೀಚೆಗೆ ತೀರ್ಪು ನೀಡಿದೆ. ಹೀಗಾಗಿ ಜನರು ಈ ಅನುಮತಿ ಇಲ್ಲದೆ ಮನೆ ಕಟ್ಟಬೇಡಿ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು "ಇಡೀ ದೇಶಕ್ಕೆ ಈ ತೀರ್ಪು ಅನ್ವಯವಾಗಲಿದೆ. ಇದುವರೆಗೂ ಹಳ್ಳಿಗಳು ಹಾಗೂ ನಗರ ಪ್ರದೇಶಗಳಲ್ಲಿ ಕಟ್ಟಡ ನಕ್ಷೆ ಅನುಮತಿ ಪಡೆಯದೆ ಮನೆ ಕಟ್ಟಿಕೊಂಡು, ವಿದ್ಯುತ್ ಹಾಗೂ ನೀರಿನ ಸಂಪರ್ಕಕ್ಕೆ ಅರ್ಜಿ ಹಾಕಿದ್ದಾರೆ. ಇನ್ನು ಮುಂದೆ ಕಟ್ಟಡ ನಕ್ಷೆ ಅನುಮೋದನೆ ಪಡೆಯದೇ ಯಾರೂ ಮನೆ ಕಟ್ಟಬಾರದು. ಸುಪ್ರೀಂ ಕೋರ್ಟ್ ನಿರ್ದೇಶನದ ಹಿನ್ನೆಲೆಯಲ್ಲಿ ಸಾರ್ವಜನಿಕರು ಮತ್ತೆ ಇಂತಹ ಸಾಹಸಕ್ಕೆ ಕೈ ಹಾಕಬಾರದು ಎಂದು ತಿಳಿಸಿದ್ದಾರೆ. ಅಕ್ರಮವಾಗಿ ಮನೆ ಕಟ್ಟಿದರೆ ಸಕ್ರಮ ಮಾಡುವುದು ಕಷ್ಟವಾಗಲಿದ್ದು ನೀರು ಹಾಗೂ ವಿದ್ಯುತ್ ಸಂಪರ್ಕ ಸಿಗುವುದಿಲ್ಲ." ಎಂದು ಸ್ಪಷ್ಟಪಡಿಸಿದ್ದಾರೆ.

<><><>

ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಸುರಿಯುತ್ತಿರುವ ಭಾರೀ ಮಳೆ ಹಾಗೂ ಮಹಾರಾಷ್ಟ್ರದ ಘಟಪ್ರದೇಶದಲ್ಲಿ ಆಗುತ್ತಿರುವ ನಿರಂತರ ಮಳೆಯಿಂದಾಗಿ ಬೆಳಗಾವಿ ತಾಲೂಕು ಸೇರಿದಂತೆ ಖಾನಾಪೂರ, ಚಿಕ್ಕೋಡಿ ವಿಭಾಗದ ಜನಜೀವನ ಅಸ್ತವ್ಯಸ್ತಗೊಂಡಿದೆ. ಈ ಭಾಗದ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಮಲಪ್ರಭಾ ನದಿ ಸೇರುವ ಹಾಲಾತ್ರಿ ಹಳ್ಳ ತುಂಬಿ ಹರಿಯುತ್ತಿರುವುದರಿಂದ ನೆರಸೆ, ಮಂತುರ್ಗಾ, ಅಶೋಕನಗರ, ಗವಳಿವಾಡ, ಹೆಮ್ಮಡಗಾ ಸೇರಿದಂತೆ ೧೫ಕ್ಕೂ ಅಧಿಕ ಗ್ರಾಮಗಳ ಸಂಪರ್ಕ ಕಡಿತಗೊಂಡಿದೆ. ಮಳೆಯಿಂದಾಗಿ ಕುಸುಮನಾಳ ಸೇತುವೆ ಕುಸಿದ ಪರಿಣಾಮ ಜಾಂಬೋಟಿ

ಮಾರ್ಗದ ಗೋವಾ ಸಾರಿಗೆ ಸಂಪರ್ಕ ಕಳೆದ ಒಂದು ವಾರದಿಂದ ಸ್ಥಗಿತಗೊಂಡಿದೆ. ಖಾನಾಪೂರ ತಾಲೂಕಿನಾದ್ಯಂತೆ ಮುಂಗಾರು ಬಿತ್ತನೆ ಮಾಡಿ ಭತ್ತದ ಬೆಳೆಯಲ್ಲಿ ನೀರು ಪ್ರವೇಶಿಸಿದ್ದು, ಸಾವಿರಾರು ಹೆಕ್ಟರ್ ಪ್ರದೇಶ ಜಲಾವೃತಗೊಂಡಿದೆ. ಈ ಕುರಿತಂತೆ ಬೆಳಗಾವಿ ಪ್ರತಿನಿಧಿ ಕೆ.ಎಂ ದೊಡ್ಡಮನಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ : ದೊಡ್ಡಮನಿ, ವರದಿಗಾರ**

ಬೆಳಗಾವಿ ಜಿಲ್ಲೆಯ ಬೆಳಗಾವಿ , ಖಾನಾಪುರ ಮತ್ತು ಕಿತ್ತೂರು ತಾಲ್ಲೂಕಿನ ಅಂಗನವಾಡಿ ಕೇಂದ್ರಗಳು, ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರಾಥಮಿಕ ಶಾಲೆ, ಪ್ರೌಢಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಿಗೆ ನಾಳೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ರಜೆ ಘೋಷಿಸಿದ್ದಾರೆ. ಕೊಡಗು ಜಿಲ್ಲೆಯಲ್ಲಿ ಭಾರೀ ಮಳೆ, ಗಾಳಿ ಮುಂದುವರೆದಿದ್ದು, ರೆಡ್ ಅಲರ್ಟ್ ಘೋಷಣೆಯಾಗಿದೆ. ಹಾರಂಗಿ ಜಲಾಶಯಕ್ಕೆ ಭಾರೀ ಪ್ರಮಾಣದಲ್ಲಿ ನೀರು ಹರಿದು ಬರುತ್ತಿರುವ ಹಿನ್ನಲೆಯಲ್ಲಿ ಜಲಾಶಯದಿಂದ ನದಿಗೆ ಇಂದು ಸಂಜೆ ೧೦ ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗಿದೆ. ಭಾರೀ ಮಳೆ ಹಿನ್ನಲೆಯಲ್ಲಿ ನಾಳೆ ಮಡಿಕೇರಿ ಮತ್ತು ಸೋಮವಾರಪೇಟೆ ತಾಲೂಕಿನ ಪ್ರಾಥಮಿಕ, ಪ್ರೌಡಶಾಲೆ, ಪದವಿಪೂರ್ವ ಕಾಲೇಜುಗಳಿಗೆ ರಜೆ ನೀಡಿ ಶಿಕ್ಷಣಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಕೊಂಚ ಬಿಡುವು ಕೊಟ್ಟಿದ್ದ ಮಳೆ ಮತ್ತೆ ಆರಂಭವಾಗಿದೆ. ಜಿಲ್ಲೆಯಾದ್ಯಂತ ಮಳೆಯಿಂದಾಗಿ ಕೃಷಿ ಚಟುವಟಿಕೆಗಳು ನಿಂತು ಹೋಗಿದೆ.

<><><><>

ವಾರಕ್ಕೆ ಮೂರು ದಿನ ಕಾವೇರಿ ಆರತಿ ನಡೆಸಲು ಸರ್ಕಾರ ನಿರ್ಧರಿಸಿದೆ. ವಿಧಾನ ಸೌಧದಲ್ಲಿಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಚಿವರು, ಶಾಸಕರು, ರೈತ ಮುಖಂಡರ ಜೊತೆ ಸಭೆ ನಡೆಸಿ ಈ ನಿರ್ಧಾರ ಕೈಗೊಂಡಿದ್ದಾರೆ. ೧೦ ಸಾವಿರ ಆಸನಗಳ ವ್ಯವಸ್ಥೆ ಮಾಡಲಿದ್ದು ಇದರಲ್ಲಿ ಶೇಕಡಾ ೭೦ರಷ್ಟು ಆಸನಗಳು ಉಚಿತವಾಗಿರಲಿದೆ. ಶೇಕಡಾ ೩೦ ರಷ್ಟು ಆಸನಗಳಿಗೆ ದರ ನಿಗದಿ ಪಡಿಸಲಾಗುವುದು ಎಂದು ಉಪಮುಖ್ಯಮಂತ್ರಿ ತಿಳಿಸಿದ್ದಾರೆ. ಕಾವೇರಿ ಆರತಿ ಯಾವ ರೀತಿ ನಡೆಯಲಿದೆ ಎಂಬುದನ್ನು ಇನ್ನೆರಡು ದಿನಗಳಲ್ಲಿ ಬಿಡುಗಡೆ ಮಾಡಲಾಗುವುದು. ಕಾವೇರಿ ಆರತಿಯಿಂದ ಕೆಆರ್‌ಎಸ್ ಆಣೆಕಟ್ಟೆಗೆ ಯಾವುದೇ ತೊಂದರೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಗ್ರಾಮ ಪಂಚಾಯತಿಗಳ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಡಿಟ್ ಆಕ್ಷೇಪಣೆಗಳು ಮತ್ತು ವಸೂಲಾತಿ ಕಂಡಿಕೆಗಳ ತೀರುವಳಿಗಾಗಿ ೧೦೦ ದಿನಗಳ ಗ್ರಾಮ ಪಂಚಾಯತಿ ಲೆಕ್ಕಪರಿಶೋಧನ ಅಭಿಯಾನ ಆರಂಭಗೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಈ ಮಾಹಿತಿ ನೀಡಿದ ಅವರು ಲೆಕ್ಕ ಪರಿಶೋಧನಾ ಅಭಿಯಾನವನ್ನು ಜೂನ್ ೧೦ ರಿಂದ ಸೆಪ್ಟೆಂಬರ್ ೨೦೨೫ ರವರೆಗೆ ಎಲ್ಲಾ ಜಿಲ್ಲೆಗಳಲ್ಲಿ ನಡೆಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ವಿಧಾನ ಸಭೆ ಹಾಗೂ ಪರಿಷತ್‌ಗೆ ಸಂಬಂಧಿಸಿದ ಸಭೆಗಳಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಬಾಕಿ ಇರುವ ಲೆಕ್ಕ ಪರಿಶೋಧನೆ ಕಂಡಿಕೆಗಳು ತೀರುವಳಿಯಾಗದಿರುವ ಬಗ್ಗೆ ಚರ್ಚೆಯಾಗುತ್ತಲೇ ಇರುತ್ತದೆ. ೨೦೨೨-೨೩ ರ ಅಂತ್ಯಕ್ಕೆ ೧ ಸಾವಿರದ ೫೦೫.೮೬ ಕೋಟಿ ರೂಪಾಯಿ ಮೊತ್ತದ ೫೬ ಸಾವಿರದ ೫೫೧ ಕಂಡಿಕೆಗಳು ತೀರುವಳಿಯಾಗಬೇಕಿರುವ ಕಾರಣದಿಂದಾಗಿ ಈ ಅಭಿಯಾನ ನಡೆಸಲಾಗುತ್ತಿದೆ ಎಂದು ಸಚಿವರು ಹೇಳಿದ್ದಾರೆ. ಸಚಿವರು ಬಾಕಿ ಇರುವ ಲೆಕ್ಕ ಪರಿಶೋಧನಾ ಕಂಡಿಕೆಗಳನ್ನು ನಿಯಮಾನುಸಾರ ಇತ್ಯರ್ಥಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><>

ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ನವದೆಹಲಿಯಲ್ಲಿ ಇಂದು ಲೋಕಸಭಾಧ್ಯಕ್ಷ ಓಂ.ಬಿರ್ಲಾ ಅವರನ್ನು ಭೇಟಿ ಮಾಡಿ ೧೧ನೇ ಕಾಮನ್ ವೆಲ್ತ್ ಸಂಸದೀಯ ಸಂಘ ಭಾರತ ವಲಯದ ಸಮ್ಮೇಳನವನ್ನು ನಡೆಸಲು ಕರ್ನಾಟಕವನ್ನು ಆಯ್ಕೆ ಮಾಡಿದಕ್ಕಾಗಿ ಕೃತಜ್ಞತೆಗಳನ್ನು ಸಲ್ಲಿಸಿದರು. ಸಮ್ಮೇಳನದಲ್ಲಿ ಭಾರತದ ಎಲ್ಲಾ ರಾಜ್ಯಗಳ ಸಭಾಧ್ಯಕ್ಷರು ಭಾಗವಹಿಸುತ್ತಿದ್ದು ಕಾಮನ್ ವೆಲ್ತ್ ದೇಶಗಳ ಪೀಠಾಸೀನಾಧಿಕಾರಿಗಳನ್ನು ಆಹ್ವಾನಿಸುವ ಕುರಿತು ಹಾಗೂ ಸಮ್ಮೇಳನದಲ್ಲಿ ಚರ್ಚಿಸಬೇಕಾದ ವಿಷಯಗಳ ಕುರಿತು ಸಮಾಲೋಚನೆ ನಡೆಸಿದರು. ಸಮ್ಮೇಳನದ ಉದ್ಘಾಟನಾ ಸಮಾರಂಭ ಸೆಪ್ಟೆಂಬರ್ ೮ ರಂದು ವಿಧಾನಸೌಧದ ಬೃಹತ್ ಮೆಟ್ಟಲುಗಳ ಮೇಲೆ ನಡೆಯಲಿದೆ ಎಂದು ಲೋಸಭಾಧ್ಯಕ್ಷರ ಗಮನಕ್ಕೆ ತಂದಿದ್ದಾರೆ.

<><><>

ಸರ್ಕಾರದಲ್ಲಿ ಹಣವಿಲ್ಲ ಎಂದು ಗೃಹಸಚಿವ ಡಾ. ಜಿ. ಪರಮೇಶ್ವರ್ ಸತ್ಯವನ್ನೇ ಹೇಳಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಭ್ರಷ್ಟಚಾರದಿಂದ

ಕೂಡಿದ್ದು ಯಾವುದೇ ನಿರ್ದೇಶನವಿಲ್ಲದೆ ಕಾರ್ಯ ನಿರ್ವಹಿಸುತ್ತಿದೆ ಎಂದು ಆರೋಪಿಸಿದ್ದಾರೆ. ರೈತರಿಗೆ ಪ್ರೋತ್ಸಾಹ ಧನವಾಗಿ ನೀಡಬೇಕಾದ ೭೫೦ ಕೋಟಿ ರೂಪಾಯಿಗಳನ್ನು ಇನ್ನೂ ಪಾವತಿಸಿಲ್ಲ. ಬದಲಾಗಿ ಹಾಲು ಒಕ್ಕೂಟಗಳಿಗೆ ಬೆಲೆ ಹೆಚ್ಚಿಸುವಂತೆ ತಿಳಿಸಲಾಗಿದೆ ಎಂದು ದೂರಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>